ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನಡೆಸುವ ಶಾಲಾ ಕಾಲೇಜುಗಳ ಉಪನ್ಯಾಸಕರ ಬಗ್ಗೆ

ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-

347(402) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ನಡೆಸುವ ಪ್ರೌಢಶಾಲೆಗಳಿಗೆ ಶಿಕ್ಷಕರು ಹಾಗೂ ಪದವಿ ಪೂರ್ವ ಕಾಲೇಜು ಮತ್ತು ಪದವಿ ಕಾಲೇಜುಗಳಿಗೆ ಉಪನ್ಯಾಸಕರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ರೀತಿ ಎಷ್ಟು ಶಿಕ್ಷಕರು ಮತ್ತು ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲಾಗಿದೆ;

(ಇ) ಸದರಿಯವರುಗಳಿಗೆ ಕಳೆದ ಮೂರು ತಿಂಗಳಿಂದ ವೇತನ ನೀಡದೆ ಇರಲು ಕಾರಣಗಳೇನು ?